# ರಾಜ್ಯದ ರಾಜೇಶ್‌ಗೆ ಅಕ್ರಂ ತರಬೇತಿ

## ● ನವದೆಹಲಿಯಲ್ಲಿ 15 ದಿನಗಳ ಕಾಲ ಅಭ್ಯಾಸ ● ರಾಜೇಶ್ ವೇಗದ ಬೌಲರ್

ಕನ್ನಡಪ್ರಭವಾರ್ತೆ, ಬೆಂಗಳೂರು, ಜು.8

ಕರ್ನಾಟಕದ ವೇಗದ ಬೌಲರ್ ರಾಜೇಶ್ ಸಿಂಗ್‌ಗೆ ಪಾಕಿಸ್ತಾನದ ಮಾಜಿ ನಾಯಕ ವಾಸಿಂ ಅಕ್ರಂ ದೆಹಲಿಯಲ್ಲಿ 15 ದಿನಗಳ ಕಾಲ ತರಬೇತಿ ನೀಡಲಿದ್ದಾರೆ.

ಕರ್ನಾಟಕದ 19 ಹಾಗೂ 17 ವರ್ಷದೊಳಗಿನ ತಂಡದ ವೇಗದ ಬೌಲರ್ ಆಗಿರುವ ರಾಜೇಶ್ ಸಿಂಗ್ ಗೆಟೋರ್ಡೆ ವೇಗದ ಬೌಲರ್ ಸ್ಪರ್ಧೆಯಲ್ಲಿ ಬೆಂಗಳೂರು ವಿಭಾಗದಲ್ಲಿ ಪ್ರಥಮ ಸ್ಥಾನಿಯಾಗಿದ್ದಾರೆ.

ಬೆಂಗಳೂರಿನ ಚಾಮರಾಜಪೇಟೆಯಲ್ಲಿರುವ ಆದರ್ಶ ಕಾಲೇಜಿನ ಪಿಯುಸಿ ವಿದ್ಯಾರ್ಥಿಯಾಗಿರುವ ರಾಜೇಶ್ ಸಿಂಗ್ ಮೂಲತಃ ಉತ್ತರ ಪ್ರದೇಶದವರು. ಕ್ರಿಕೆಟ್‌ಗಾಗಿಯೇ ಬೆಂಗಳೂರಿನಲ್ಲಿ ಶಿಕ್ಷಣ ಪಡೆಯುತ್ತಿರುವ ಈ ವೇಗದ ಬೌಲರ್ ನಗರದ ಜವಾನ್ಸ್ ಕ್ರಿಕೆಟ್ ಕ್ಲಬ್‌ನ ಆಟಗಾರ.

'ಕನ್ನಡ ಪ್ರಭ'ದೊಂದಿಗೆ ಮಾತನಾಡಿದ ರಾಜೇಶ್, ವಾಸಿಂ ಅಕ್ರಂ ಅವರು



ದೇಶದ 7 ವೇಗದ ಬೌಲರ್‌ಗಳಿಗೆ 15 ದಿನಗಳ ಕಾಲ ತರಬೇತಿ ನೀಡಲಿದ್ದಾರೆ. ಇದರಿಂದ ಬೌಲಿಂಗ್‌ನಲ್ಲಿ ಮತ್ತಷ್ಟು ಸುಧಾರಣೆ ಕಂಡುಕೊಳ್ಳಬಹುದಾಗಿದೆ. ರಾಜ್ಯದ ಪರ ಉತ್ತಮ ಬೌಲಿಂಗ್ ಪ್ರದರ್ಶಿಸಿ ರಣಜಿ ಆಡಬೇಕೆಂಬ ಆಸೆ ಇದೆ ಎಂದು ಹೇಳಿದ್ದಾರೆ.

ಚಿಕ್ಕಂದಿನಿಂದಲೂ ನನಗೆ ಕ್ರಿಕೆಟ್ ಎಂದರೆ ಇಷ್ಟ. ಉತ್ತರ ಪ್ರದೇಶದಲ್ಲಿ ಹೆಚ್ಚು ಅವಕಾಶ ಸಿಗದ ಕಾರಣ ಬೆಂಗಳೂರಿನಲ್ಲಿ ಶಿಕ್ಷಣ ಹಾಗೂ ಕ್ರಿಕೆಟ್‌ಗಾಗಿ ವಲಸೆ ಬಂದೆ. ಇಲ್ಲಿ ಉತ್ತಮ ಅವಕಾಶ ಸಿಕ್ಕಿದೆ. 22 ವರ್ಷದೊಳಗಿನ ರಾಜ್ಯದ ಸಂಭಾವ್ಯರ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದೇನೆ ಎಂದು ರಾಜೇಶ್ ಹೇಳಿದ್ದಾರೆ. ಕರ್ನಾಟಕದಲ್ಲಿ ಕ್ರಿಕೆಟ್ ಆಟಗಾರರಿಗೆ ಉತ್ತಮ ಪ್ರೋತ್ಸಾಹ ನೀಡಲಾಗುತ್ತಿದೆ. ನನ್ನ ಸಾಧನೆಗೆ ಪ್ರೋತ್ಸಾಹ ನೀಡುತ್ತಿರುವ ರಾಜ್ಯ ಕ್ರಿಕೆಟ್ ಸಂಸ್ಥೆಗೆ ನಾನು ಚಿರಋಣಿಯಾಗಿದ್ದೇನೆ. ರಾಜ್ಯದ ಪರ ಇನ್ನೂ ಉತ್ತಮ ಸಾಧನೆ ಮಾಡಬೇಕೆಂಬ ಹಂಬಲ ನನಗಿದೆ. ಉತ್ತಮ ಅವಕಾಶಕ್ಕಾಗಿ ಕಾಯುತ್ತಿದ್ದೇನೆ ಎಂದಿದ್ದಾರೆ. ಜುಲೈ 15 ರಿಂದ ರಾಜೇಶ್ ದೆಹಲಿಯಲ್ಲಿ ತರಬೇತಿ ಪಡೆಯಲಿದ್ದಾರೆ.